# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1426 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10.03.2022 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | The noise pollution rules – 2000 ಪ್ರಕಾರ ಖಾಯಂ ಆಗಿ ಧ್ವನಿ ವರ್ಧಕಗಳನ್ನು ಅಳವಡಿಸಲು ನಿಯಮದಲ್ಲಿ ಅವಕಾಶವಿಲ್ಲವೆಂದಾದಲ್ಲಿ, ಮಸೀದಿಗಳಲ್ಲಿ ಖಾಯಂ ಆಗಿ ಧ್ವನಿವರ್ಧಕಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಈ ಕುರಿತು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; | The Noise Pollution Rules-2000 ಪ್ರಕಾರ ಖಾಯಂ ಧ್ವನಿವರ್ಧಕಗಳನ್ನು ಆಗಿ ಅಳವಡಿಸುವಂತೆ ಅಥವಾ ಬಳಸುವಂತೆ ಅನುಮತಿಯನ್ನು ಪೊಲೀಸ್ ಇಲಾಖೆ ವತಿಯಿಂದ ನೀಡಲಾಗಿರುವುದಿಲ್ಲ ಹಾಗೂ ಬೆಂಗಳೂರು ನಗರ ವ್ಯಾಪ್ತಿಯ ಪೊಲೀಸ್ ಠಾಣಾ ಸರಹದ್ದಿನಲ್ಲಿರುವ ಮಸೀದಿಗಳಿಗೆ ಲೌಡ್ ಸ್ಪೀಕರ್‌ನಿಂದ ಹೊರಡುವ ಶಬ್ದ 55 ಡೆಸಿಬಲ್ ನಿಯಮಿತದಲ್ಲಿ ಇರುವಂತೆ ನೋಡಿಕೊಳ್ಳುವ ಬಗ್ಗೆ ಮಸೀದಿ ಮೇಲ್ವಿಚಾರಕರಿಗೆ ದಿನಾಂಕ:02.02.2022ರವರೆಗೆ ಒಟ್ಟು 150 ನೋಟೀಸ್‌ಗಳನ್ನು ನೀಡಲಾಗಿರುತ್ತದೆ. ಹಾಗೂ ಈ ಬಗ್ಗೆ ಪಿಸಿಆರ್ (Private Complaint Report) ಕಾಯ್ದೆ ಅನ್ವಯ 27 ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗಿರುತ್ತದೆ. |
| (ಆ) | ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಮಸೀದಿಗಳ ಮೇಲೆ ಖಾಯಂ ಆಗಿ ಇರುವ ಎಷ್ಟು ಲೌಡ್ ಸ್ಪೀಕರ್‌ಗಳನ್ನು ತೆರವುಗೊಳಿಸಲಾಗಿದೆ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; | |
| (ಇ) | ದೇವಸ್ಥಾನಗಳ ಗಂಟೆಯ ಶಬ್ದವು ಲೌಡ್ ಸ್ಪೀಕರ್ ನಲ್ಲಿ ಕೂಗುವ ಆಜಾನ್ ಶಬ್ದಕ್ಕಿಂತ ಹೆಚ್ಚಾಗಿದೆಯೇ ; ಇದ್ದಲ್ಲಿ, ಎಷ್ಟು ದೇವಸ್ಥಾನಗಳಿಗೆ ಗಂಟೆಯ ಶಬ್ದವು ಜೋರಾಗಿದೆ ಎಂದು ನೋಟೀಸ್ ನೀಡಲಾಗಿದೆ ? | ಘಟಕಗಳ ವ್ಯಾಪ್ತಿಯಲ್ಲಿ ದೇವಸ್ಥಾನಗಳ ಗಂಟೆಯ ಶಬ್ದವು ಆಜಾನ್ ಶಬ್ದಕ್ಕಿಂತ ಹೆಚ್ಚಾಗಿರುವುದು ಕಂಡು ಬಂದಿರುವುದಿಲ್ಲ. ಈ ಬಗ್ಗೆ ಪೊಲೀಸ್ ಇಲಾಖೆಯಿಂದ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. |

**ಹೆಚ್‌ಡಿ 111 ಎಸ್‌ಎಸ್‌ಟಿ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು